ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014-15 ದಿನಾಂಕ: 14-10-2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗದಿಂದ ಆಹವಾಲು ಸ್ವೀಕಾರ. | 15-10-2015<br>ಗುರುವಾರ<br>ಮಧ್ಯಾಹ್ನ<br>2-00 ಗಂಟೆಗೆ | ಡಾ. ಬಿ.ಆರ್. ಅಂಬೇಡ್ಕರ್ ಭವನ,<br>ವಸಂತನಗರ,<br>ಮಿಲ್ಲರ್ಸ್ ರಸ್ತೆ,<br>ಬೆಂಗಳೂರು. |
| 2. | ಪತ್ರಿಕಾಗೋಷ್ಠಿ<br>ಎನ್. ಹೆಚ್.ಶಿವಶಂಕರ್ ರೆಡ್ಡಿ,<br>ವಿಧಾನಸಭೆ ಉಪಾಧ್ಯಕ್ಷರು. | 15-10-2015<br>ಗುರುವಾರ<br>ಸಂಜೆ<br>3-30 ಗಂಟೆಗೆ | ಕೊಠಡಿ ಸಂಖ್ಯೆ 135,<br>ಮೊದಲನೇ ಮಹಡಿ,<br>ವಿಧಾನಸೌಧ, ಬೆಂಗಳೂರು |
| 3. | ಕರ್ನಾಟಕ ವಿಧಾನಸಭೆಯ ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿಯ ಪ್ರಾರಂಭಿಕ ಸಭೆ<br>ಅಧ್ಯಕ್ಷತೆ:<br>ಎನ್. ಹೆಚ್.ಶಿವಶಂಕರ್ ರೆಡ್ಡಿ,<br>ವಿಧಾನಸಭೆ ಉಪಾಧ್ಯಕ್ಷರು.<br>ಸೂಚನೆ: ಸಭೆಯ ಆರಂಭದ ಮೂರು | 15-10-2015<br>ಗುರುವಾರ<br>ಸಂಜೆ<br>4-30 ಗಂಟೆಗೆ | ಕೊಠಡಿ ಸಂಖ್ಯೆ 135,<br>ಮೊದಲನೇ ಮಹಡಿ,<br>ವಿಧಾನಸೌಧ, ಬೆಂಗಳೂರು |

| | | | |
|---|---|---|---|
| | ನಿಮಿಷ ಛಾಯಾಗ್ರಾಹಕರು ಹಾಗೂ ವಿದ್ಯುನ್ಮಾನ ಮಾಧ್ಯಮದವರಿಗೆ ಅವಕಾಶ ಕಲ್ಪಿಸಲಾಗಿದೆ. | | |

## ಪತ್ರಿಕಾ ಪ್ರಕಟಣೆ

# ಪದವಿಪೂರ್ವ ಕಾಲೇಜು ಆರಂಭಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 14 (ಕರ್ನಾಟಕ ವಾರ್ತೆ)

2016–17 ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದಲ್ಲಿ ಖಾಸಗಿ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಇಚ್ಛಿಸುವ ಅರ್ಹ ಖಾಸಗಿ ಶಿಕ್ಷಣ ಸಂಸ್ಥೆ/ಟ್ರಸ್ಟ್‌ಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ನಿಗದಿತ “ಅರ್ಜಿ ನಮೂನೆ” ಯಲ್ಲಿ ನವೆಂಬರ್ 2 ರ ನಂತರ ಹಾಗೂ ನವೆಂಬರ್ 18 ರೊಳಗೆ ಹೆಸರನ್ನು ನೋಂದಾಯಿಸಿಕೊಳ್ಳಲು ಜಂಟಿ ನಿರ್ದೇಶಕರು (ಮಾನ್ಯತೆ ಮತ್ತು ಅನುದಾನ) ಪದವಿ ಪೂರ್ವ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಅರ್ಜಿಯನ್ನು ಸಲ್ಲಿಸುವುದು. ಅರ್ಜಿ ನಮೂನೆ ಮತ್ತು ಹೆಚ್ಚಿನ ವಿವರಗಳನ್ನು ಇಲಾಖೆಯ ವೆಬ್‌ಸೈಟ್ “www.puc.kar.nic.in” ಇಲ್ಲಿಂದ ಹಾಗೂ ಯಾವುದೇ ಸ್ಪಷ್ಟೀಕರಣ ಬೇಕಾದಲ್ಲಿ ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರ ಕಚೇರಿಯಿಂದ ಪಡೆಯಬಹುದು.

ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಿ 2014–15 ಮತ್ತು 2015–16 ಶೈಕ್ಷಣಿಕ ಸಾಲಿನಲ್ಲಿ ಅರ್ಜಿ ಶುಲ್ಕವನ್ನು ಪಾವತಿಸಿ ಈ ಕಚೇರಿಗೆ ಅರ್ಜಿ ಸಲ್ಲಿಸಿರುವ ಖಾಸಗಿ ಅರ್ಹ ಶಿಕ್ಷಣ ಸಂಸ್ಥೆಗಳು/ಟ್ರಸ್ಟ್‌ಗಳು ಪುನ: ಹೊಸದಾಗಿ 2016–17 ನೇ ಶೈಕ್ಷಣಿಕ ಸಾಲಿನಲ್ಲಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಮತ್ತೊಮ್ಮೆ ಅರ್ಜಿ ಶುಲ್ಕ ಪಾವತಿಸುವ ಅವಶ್ಯಕತೆ ಇರುವುದಿಲ್ಲ. ಆದರೆ, ಇಂತಹ ಸಂಸ್ಥೆಗಳು 2016–17 ನೇ ಶೈಕ್ಷಣಿಕ ಸಾಲಿನಲ್ಲಿ ಖಾಸಗಿ ಅನುದಾನ ರಹಿತ ಪದವಿಪೂರ್ವ ಕಾಲೇಜನ್ನು ಪ್ರಾರಂಭಿಸಲು ಇಚ್ಛಿಸಿದ್ದಲ್ಲಿ ಎಲ್ಲಾ ಸಿದ್ದತೆ ಮಾಡಿಕೊಂಡಿರುವ ಬಗೆಗೆ ಪ್ರಸ್ತುತ ವೇಳಾಪಟ್ಟಿಯಂತೆ ನಿಗದಿತ ಅರ್ಜಿಯೊಂದಿಗೆ ಮನವಿ ಸಲ್ಲಿಸಬಹುದೆಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಪ್ರಕಟಣೆ ತಿಳಿಸಿದೆ.

ಪಲ್ಲವಿ:ಬಾಬು:ಜಿಪಿಆರ್.

## ಕರ್ನಾಟಕ ಕಲಾಶ್ರೀ ಪ್ರಶಸ್ತಿಗೆ ಆಯ್ಕೆ

ಬೆಂಗಳೂರು, ಅಕ್ಟೋಬರ್ 14 (ಕರ್ನಾಟಕ ವಾರ್ತೆ)

ಕರ್ನಾಟಕ ಸಂಗೀತ ಅಕಾಡೆಮಿಯು 2015-16ನೇ ಸಾಲಿನ ಕರ್ನಾಟಕ ಕಲಾಶ್ರೀ ಪ್ರಶಸ್ತಿಗೆ ಕೆಳಕಂಡವರನ್ನು ಆಯ್ಕೆ ಮಾಡಿದೆ.

ಗೌರವ ಪ್ರಶಸ್ತಿಯನ್ನು ಸುಗಮ ಸಂಗೀತಕ್ಕಾಗಿ ಬೆಂಗಳೂರಿನ ಶ್ರೀಮತಿ ಎಂ. ಕೆ. ಜಯಶ್ರೀ, ಕಥಾಕೀರ್ತನ ಪ್ರಶಸ್ತಿಗಾಗಿ ಕೊಪ್ಪಳದ ಶಿವರಾಜಶಾಸ್ತ್ರಿ ಅವರನ್ನು ಆಯ್ಕೆ ಮಾಡಲಾಗಿದೆ.

ವಾರ್ಷಿಕ ಪ್ರಶಸ್ತಿಗಾಗಿ ವಿವಿಧ ಪ್ರಕಾರಗಳಲ್ಲಿ ಆಯ್ಕೆ ಮಾಡಲಾಗಿದ್ದು, ಹಾಡುಗಾರಿಕೆಯಲ್ಲಿ ಬೆಂಗಳೂರಿನ ಗುಡಿಬಂಡೆ ಕುಮಾರಸ್ವಾಮಿ, ಮೈಸೂರಿನ ಶ್ರೀಮತಿ ರಾಜಲಕ್ಷ್ಮಿ ಮತ್ತು ಚಿಕ್ಕಬಳ್ಳಾಪುರ ವಿರೂಪಚಂದ್ರ ಗೋಪಾಲಕೃಷ್ಣಾಚಾರ್ ಹಾಗೂ ಮೃದಂಗಕ್ಕಾಗಿ ಮಂಗಳೂರಿನ ಎಂ.ಆರ್. ಸಾಯಿನಾಥ್ ಅವರನ್ನು ಆಯ್ಕೆ ಮಾಡಲಾಗಿದೆ.

ಹಿಂದೂಸ್ತಾನಿ ಸಂಗೀತ ಕ್ಷೇತ್ರದಲ್ಲಿ ಗಾಯನಕ್ಕಾಗಿ ಶಿವಮೊಗ್ಗದ ಹುಮಾಯೂನ್ ಹರ್ಲಾಪುರ, ರುದ್ರವೀಣೆಗಾಗಿ ಶಿರಸಿಯ ಆರ್. ವಿ. ಹೆಗಡೆ, ವಯಲಿನ್‌ಗಾಗಿ ಬಾಗಲಕೋಟೆಯ ವಾದಿರಾಜ್ ನಿಂಬರಗಿ ಮತ್ತು ತಬಲ ವಾದನಕ್ಕಾಗಿ ರಾಯಚೂರಿನ ಈರಣ್ಣ ಜಾಲಿಬೆಂಚಿ ಅವರನ್ನು ಆಯ್ಕೆ ಮಾಡಲಾಗಿದೆ

ನೃತ್ಯ ಪ್ರಕಾರದಲ್ಲಿ ಚಾಮರಾಜನಗರದ ಶ್ರೀಮತಿ ಉಷಾ ವೇಣುಗೋಪಾಲ್, ಬೆಂಗಳೂರಿನ ಎ.ಎನ್. ಸುಧೀರ್‌ಕುಮಾರ್ ಹಾಗೂ ನೃತ್ಯ ಗಾಯನ ವಿಭಾಗದಲ್ಲಿ ಬೆಂಗಳೂರಿನ ಶ್ರೀಮತಿ ರಮಾ ಜಗನ್ನಾಥ್ ಅವರನ್ನು ಆಯ್ಕೆ ಮಾಡಲಾಗಿದೆ.

ಸುಗಮ ಸಂಗೀತ ವಿಭಾಗದಲ್ಲಿ ಮೈಸೂರಿನ ಶ್ರೀಮತಿ ಜಿ. ಪುಷ್ಪಾಲತಾ, ಕಥಾಕೀರ್ತನ ವಿಭಾಗದಲ್ಲಿ ತುಮಕೂರಿನ ಎನ್. ಕೆ. ಮೋಹನ್ ಕುಮಾರ್, ಗಮಕ ವಿಭಾಗದಲ್ಲಿ ಬೆಂಗಳೂರಿನ ಎ.ವಿ. ಪ್ರಸನ್ನ ಮತ್ತು ಶ್ರೀಮತಿ ನಿರ್ಮಲ ಪ್ರಸನ್ನ ಹಾಗೂ ಮೈಸೂರಿನ ಕೃಷ್ಣಗಿರಿ ರಾಮಚಂದ್ರ ಹಾಗೂ ಸಂಘ ಸಂಸ್ಥೆ ವಿಭಾಗದಲ್ಲಿ ಬೆಂಗಳೂರಿನ ಶ್ರೀರಾಮ ಲಲಿತ ಕಲಾಮಂದಿರ ಇವರುಗಳನ್ನು ಆಯ್ಕೆ ಮಾಡಲಾಗಿದೆ.

ಪ್ರಶಸ್ತಿ ಪ್ರದಾನ ಸಮಾರಂಭವು ಡಿಸೆಂಬರ್ 19 ರಂದು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಏರ್ಪಡಿಸಲಾಗುವುದು ಎಂದು ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಪ್ರಕಟಣೆ ತಿಳಿಸಿದೆ.

ಪಲ್ಲವಿಬಾಬು:ಜಿಪಿಆರ್.

## ಪ್ರತಿಭಾನ್ವಿತ ಕ್ರೀಡಾಪಟುಗಳಿಂದ ಕ್ರೀಡಾ ತರಬೇತಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 14 (ಕರ್ನಾಟಕ ವಾರ್ತೆ)

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಮಾನ್ಯತೆ ಪಡೆದ ರಾಷ್ಟ್ರೀಯ ಚಾಂಪಿಯನ್‌ಷಿಪ್‌ಗಳಲ್ಲಿ ಪದಕ ವಿಜೇತ ಹಾಗೂ ಮಾನ್ಯತೆ ಪಡೆದ ಅಂತರರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಗಣನೀಯ ಸಾಧನೆ ದಾಖಲಿಸಿರುವ ಕರ್ನಾಟಕದ ಕ್ರೀಡಾಪಟುಗಳಿಂದ ಉನ್ನತ ಕ್ರೀಡಾ ತರಬೇತಿಯ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಿದೆ.

ಅರ್ಜಿ ನಮೂನೆ ಮತ್ತು ವಿವರಗಳನ್ನು ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು – 560 001 ಇಲ್ಲಿ ಅಥವಾ ಅಂತರ್ಜಾಲ ತಾಣ www.karnatakayouthportal.in, www.karnataka.gov.in/dyes ಗಳಲ್ಲಿ ಪಡೆಯಬಹುದು.

ಭರ್ತಿ ಮಾಡಿದ ಅರ್ಜಿಗಳನ್ನು ಕೆಳಕಾಣಿಸಿದವರಿಗೆ ಸಲ್ಲಿಸಲು ಅಂತಿಮ ದಿನ ನವೆಂಬರ್ 16, 2015 ಆಗಿರುತ್ತದೆ.

ಪಲ್ಲವಿ:ಬಾಬು:ಜಿಪಿಆರ್.

# ಕ್ರೀಡಾಪಟುಗಳ ತರಬೇತಿಗೆ ಸಹಾಯಧನ

ಬೆಂಗಳೂರು, ಅಕ್ಟೋಬರ್ 14 (ಕರ್ನಾಟಕ ವಾರ್ತೆ)

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಮಾನ್ಯತೆ ಪಡೆದ ರಾಷ್ಟ್ರೀಯ ಚಾಂಪಿಯನ್‌ಷಿಪ್‌ಗಳಲ್ಲಿ ಪದಕ ವಿಜೇತ ಹಾಗೂ ಮಾನ್ಯತೆ ಪಡೆದ ಅಂತರರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಗಣನೀಯ ಸಾಧನೆ ದಾಖಲಿಸಿರುವ ಕರ್ನಾಟಕದ ಕ್ರೀಡಾಪಟುಗಳಿಗೆ ಉನ್ನತ ಕ್ರೀಡಾ ತರಬೇತಿಗಾಗಿ ಸಹಾಯಧನ ನೀಡಲು ಉದ್ದೇಶಿಸಿದೆ. ಒಲಿಂಪಿಕ್/ಪ್ಯಾರಾಒಲಿಂಪಿಕ್, ವಿಶ್ವ ಚಾಂಪಿಯನ್‌ಷಿಪ್, ಕಾಮನ್‌ವೆಲ್ತ್ ಗೇಮ್ಸ್, ಏಷ್ಯನ್ ಗೇಮ್ಸ್/ಏಷ್ಯನ್ ಚಾಂಪಿಯನ್‌ಷಿಪ್ ಮತ್ತಿತರ ಪ್ರಮುಖ ಕ್ರೀಡಾಕೂಟಗಳಲ್ಲಿ ಪದಕ ಪಡೆಯುವ ಸಾಧ್ಯತೆ ಇರುವ ಸಂಭಾವ್ಯ ಪ್ರತಿಭಾನ್ವಿತ ಕ್ರೀಡಾಪಟುಗಳಿಗಾಗಿ ಈ ಕಾರ್ಯಕ್ರಮ ರೂಪಿಸಲಾಗಿದೆ. ಈ ಕಾರ್ಯಕ್ರಮದಡಿ ಆಯ್ಕೆಗೊಂಡ ಕ್ರೀಡಾಪಟುಗಳಿಗೆ ಕ್ರೀಡಾ ಕಿಟ್, ಪೌಷ್ಠಿಕ ಆಹಾರ, ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಪ್ರಯಾಣ ವೆಚ್ಚ ಹಾಗೂ ತರಬೇತಿಯ ವೆಚ್ಚ ಭರಿಸಲು ನಿಯಮಾನುಸಾರ ಸಹಾಯಧನ ನೀಡಲಾಗುವುದು.

ಹೆಚ್ಚಿನ ಮಾಹಿತಿಯನ್ನು ಹಾಗೂ ಅರ್ಜಿ ನಮೂನೆಯನ್ನು ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು – 560 001 ಇಲ್ಲಿ ಪಡೆಯಬಹುದು. ವಿವರಗಳನ್ನು ಹಾಗೂ ಅರ್ಜಿ ನಮೂನೆಗಳನ್ನು ಕೆಳಕಾಣಿಸಿದ ಅಂತರ್ಜಾಲ www.karnatakayouthportal.in, www.karnataka.gov.in/dyes

ತಾಣಗಳಿಂದಲೂ ಪಡೆಯಬಹುದು. ದಾಖಲೆಗಳೊಂದಿಗೆ ಭರ್ತಿಮಾಡಿದ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ: 16-11-2015 ಆಗಿರುತ್ತೆ.

ಭರ್ತಿಮಾಡಿದ ಅರ್ಜಿ ಮತ್ತು ಸ್ವಯಂ ದೃಢೀಕೃತ ದಾಖಲೆಗಳನ್ನು ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು - 1 ಇಲ್ಲಿಗೆ ಸೀಲ್ ಮಾಡಿದ ಲಕೋಟೆಯಲ್ಲಿಟ್ಟು, ಸಲ್ಲಿಸತಕ್ಕದ್ದು.

ಪಲ್ಲವಿ::ಬಾಬು:ಜಿಪಿಆರ್.

## ರಾಜ್ಯದಲ್ಲಿ ಬರದ ಹಿನ್ನೆಲೆ - ಕೇಂದ್ರದಿಂದ ಎರಡು ತಿಂಗಳು ಕಳೆದರೂ ಯಾವುದೇ ನೆರವು ಬಂದಿಲ್ಲ - ಸಿದ್ದರಾಮಯ್ಯ

ಬೆಂಗಳೂರು, ಅಕ್ಟೋಬರ್ 14 (ಕರ್ನಾಟಕ ವಾರ್ತೆ)

ರಾಜ್ಯ ತೀವ್ರ ಬರಗಾಲ ಎದುರಿಸುತ್ತಿದ್ದರೂ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಈವರೆಗೂ ಯಾವುದೇ ನೆರವು ಬಂದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ವಿಧಾನಸಭೆಯ ಸಮ್ಮೇಳನ ಸಭಾಂಗಣದಲ್ಲಿ ಇಂದು ವಾಣಿಜ್ಯ ತೆರಿಗೆ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆಗೂ ಮುನ್ನ ಸುದ್ದಿಗಾರರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಮುಖ್ಯಮಂತ್ರಿ ಅವರು ರಾಜ್ಯದ ಬರದ ಸಮಸ್ಯೆ ಬಗ್ಗೆ ಆಗಸ್ಟ್ 24 ರಂದು ಕೇಂದ್ರ ಸರ್ಕಾರಕ್ಕೆ ವರದಿ ನೀಡಿ ಮನವಿ ಸಲ್ಲಿಸಲಾಗಿದೆ. ಕೇಂದ್ರ ಬರ ಅಧ್ಯಯನ ತಂಡವು ಸೆಪ್ಟೆಂಬರ್ ತಿಂಗಳಲ್ಲಿ ರಾಜ್ಯಕ್ಕೆ ಭೇಟಿನೀಡಿ ಇಲ್ಲಿನ ಸ್ಥಿತಿಗತಿಗಳನ್ನು ಅಧ್ಯಯನ ಮಾಡಿ ಕೇಂದ್ರ ಸರ್ಕಾರಕ್ಕೆ ವರದಿ ನೀಡಿದೆ. ಎರಡೂ ತಿಂಗಳು ಕಳೆದರೂ ಕೇಂದ್ರ ಸರ್ಕಾರ ಯಾವುದೇ ರೀತಿಯ ನೆರವು ನೀಡಿಲ್ಲ ಎಂದು ಮುಖ್ಯಮಂತ್ರಿ ಅವರು ಸುದ್ದಿಗಾರರೊಂದಿಗೆ ಮಾತನಾಡುತ್ತಾ ತಿಳಿಸಿದರು.

ರಾಜ್ಯದಲ್ಲಿ ತೆರಿಗೆಯನ್ನು ನಿರೀಕ್ಷಿತ ಮಟ್ಟದಲ್ಲಿ ಸಂಗ್ರಹ ಮಾಡಲಾಗುತ್ತಿದೆ ಎಂದು ತಿಳಿಸಿದ ಮುಖ್ಯಮಂತ್ರಿ ಅವರು ಕಳಸ ಬಂಡೂರಿ ವಿಷಯ ಚರ್ಚಿಸಲು ಮತ್ತೊಮ್ಮೆ ಸರ್ವಪಕ್ಷಗಳ ಸಭೆ ಕರೆಯಲು ಚಿಂತಿಸಲಾಗಿದೆ ಎಂದರು.

ಮಂಡ್ಯದಲ್ಲಿ ಇತ್ತೀಚಿಗೆ ಮೃತಪಟ್ಟ ರೈತ ಕುಟುಂಬಕ್ಕೆ ನೀಡಿದ ಚೆಕ್ ವಿತರಣೆಯಲ್ಲಿ ಯಾವುದೇ ಗೊಂದಲ ಇಲ್ಲ ಎಂದು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ ಅವರು ಈ ವಿಷಯದಲ್ಲಿ ಕೆಲವರು ಅನಗತ್ಯ ಗೊಂದಲ ಸೃಷ್ಟಿಸುತ್ತಿದ್ದಾರೆ ಎಂದರು.

ಸಾಹಿತಿ ಕಲ್ಬುರ್ಗಿ ಹತ್ಯೆ ಸಂಬಂಧ ಸಾಹಿತಿಗಳು ಪ್ರಶಸ್ತಿಗಳನ್ನು ಹಿಂದಿರುಗಿಸುತ್ತಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಾಹಿತಿಗಳ ಜೀವಮಾನದ ಸಾಧನೆ ಗುರುತಿಸಿ ಪ್ರಶಸ್ತಿಗಳನ್ನು ನೀಡಲಾಗುತ್ತದೆ. ಅಂತಹ ಪ್ರಶಸ್ತಿಗಳನ್ನು ವಾಪಸ್ಸು ನೀಡುವುದು ಸರಿಯಲ್ಲ ಎಂಬುದು ನನ್ನ ಭಾವನೆಯಾಗಿದೆ ಎಂದು ತಿಳಿಸಿದರು.

ಪಲ್ಲವಿ::ಕೆಪಿಷು:ಜಿಪಿಆರ್.

## ಈ ವಾರದ ಬೆಳ್ಳಿಸಿನಿಮಾ–ಬೆಳ್ಳಿಮಾತು:

## "ಚಿತ್ರಮಂದಿರದಲ್ಲಿ" ಚಲನಚಿತ್ರ ಪ್ರದರ್ಶನ, ಸಂವಾದ

**ಬೆಂಗಳೂರು, ಅಕ್ಟೋಬರ್ 14 (ಕರ್ನಾಟಕ ವಾರ್ತೆ)**

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ–ಬೆಳ್ಳಿಮಾತು ಕಾರ್ಯಕ್ರಮದಡಿ ಅಕ್ಟೋಬರ್ 17 ರ ಶನಿವಾರದಂದು ಬೆಳ್ಳಿ ಸಿನಿಮಾ " ಚಿತ್ರಮಂದಿರದಲ್ಲಿ " ಚಲನಚಿತ್ರ ಪ್ರದರ್ಶನವನ್ನು ಏರ್ಪಡಿಸಿದೆ. ಈ ಚಿತ್ರದ ನಿರ್ದೇಶಕ ವಿ. ಚಲ ಅವರಿಂದ ಬೆಳ್ಳಿಮಾತು ಸಂವಾದ ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಅಕ್ಟೋಬರ್ 17 ರಂದು ಸಂಜೆ 4–00 ಗಂಟೆಗೆ ನಡೆಯುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಪತ್ರಕರ್ತ ಪಿ. ಗಣಪತಿ, ಚಿತ್ರ ನಟಿ ಶ್ರೀಮತಿ ನಮಿತಾರಾವ್ ಪಾಲ್ಗೊಳ್ಳುವರು ಎಂದು ಹೆಚ್. ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್‌ಬಿಡಿ:ಬಾಬು:ಜಿಪಿಆರ್.

# ಫಲಾನುಭವಿ ಆಧಾರಿತ ತೋಟಗಾರಿಕೆ ಇಲಾಖೆ ಯೋಜನೆ  ಗಣಕೀಕೃತ ಬೆಳೆ ಧೃಢೀಕರಣಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು, ಅಕ್ಟೋಬರ್ 14 (ಕರ್ನಾಟಕ ವಾರ್ತೆ)**

ತೋಟಗಾರಿಕೆ ಇಲಾಖೆಯು ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ರೈತರನ್ನು ಪ್ರೋತ್ಸಾಹಿಸುವುದಕ್ಕಾಗಿ ಅನೇಕ ಯೋಜನೆಗಳನ್ನು ರೂಪಿಸಿದ್ದು, ಫಲಾನುಭವಿ ಆಧಾರಿತ ಯೋಜನೆಗಳ ಪ್ರಯೋಜನವನ್ನು ರೈತರು ಪಡೆಯಬೇಕಾದರೆ ಅರ್ಜಿದಾರರ ಹೆಸರಿನಲ್ಲಿರುವ ಆರ್.ಟಿ.ಸಿ ಯು ಬೆಳೆಗಳ ಹೆಸರನ್ನು ಹೊಂದಿರಬೇಕಾಗಿರುತ್ತದೆ. ಹೀಗಾಗಿ ತೋಟಗಾರಿಕೆ ಇಲಾಖೆಯು ಹಮ್ಮಿಕೊಂಡಿರುವ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕಾದರೆ ಆಯಾ ಸಾಲಿನಲ್ಲಿ ಋತುಮಾನಕ್ಕನುಗುಣವಾಗಿ ಬೆಳೆದ ತೋಟಗಾರಿಕೆ ಬೆಳೆಗಳ ಮಾಹಿತಿಯನ್ನು ಆರ್.ಟಿ.ಸಿ ಯಲ್ಲಿ ನಮೂದಿಸುವುದು ಅತ್ಯಗತ್ಯವಾಗಿರುತ್ತದೆ. ಇದರಿಂದ ತೋಟಗಾರಿಕಾ ಬೆಳೆಗಳ ನಿಖರ ಅಂಕಿ ಅಂಶಗಳು ದೊರೆಯಲಿದ್ದು, ಸರ್ಕಾರದಿಂದ ಹೆಚ್ಚಿನ ಅನುದಾನ ಪಡೆಯಲು ಸಹಾಯವಾಗಲಿದೆ. ಅಲ್ಲದೆ ರೈತರು ಯೋಜನೆಗಳ ಅನುಕೂಲ ಪಡೆಯಲು, ಬೆಳೆ ವಿಮಾ ಯೋಜನೆ ಹಾಗೂ ಸರ್ಕಾರದ ಮಟ್ಟದಲ್ಲಿ ಹೆಚ್ಚಾದ ತೋಟಗಾರಿಕೆ ಪ್ರದೇಶ ಮತ್ತು ಉತ್ಪಾದನೆಯನ್ನು ದಾಖಲಿಸುವುದರ ಮೂಲಕ ಮಾರುಕಟ್ಟೆಯ ಬೆಲೆ ನಿಯಂತ್ರಣದ ಬಗ್ಗೆ ಕ್ರಮವಹಿಸಲು ಅನುಕೂಲವಾಗಲಿದೆ.

ಈ ಹಿನ್ನಲೆಯಲ್ಲಿ ರೈತರಿಗೆ ಗಣಕೀಕೃತ ಬೆಳೆ ದೃಡೀಕರಣ ಪತ್ರವನ್ನು ನೀಡಿ, ತದನಂತರ ಆರ್.ಟಿ.ಸಿ ಯಲ್ಲಿ ದಾಖಲಾಗುವಂತೆ ವೆಬ್ ಆಧಾರಿತ ತಂತ್ರಾಂಶವನ್ನು ಭೂಮಿ ಉಸ್ತುವಾರಿ ಕೋಶದಿಂದ ಅಭಿವೃದ್ಧಿ ಪಡಿಸಲಾಗಿರುತ್ತದೆ. ಸದರಿ ತಂತ್ರಾಂಶವು ಜಿಲ್ಲೆಯ ಎಲ್ಲಾ ನಾಡ ಕಛೇರಿಗಳ ಅಟಲ್ ಜನಸ್ನೇಹಿ ಕೇಂದ್ರಗಳಲ್ಲಿ ಕಾರ್ಯಚರಣೆಯಲ್ಲಿದ್ದು, ತೋಟಗಾರಿಕೆ ಬೆಳೆಯನ್ನು ಬೆಳೆಯುವ ರೈತರಿಂದ ಅರ್ಜಿಯನ್ನು ತಂತ್ರಾಂಶದ ಮೂಲಕ ಸ್ವೀಕರಿಸಿ ಬೆಳೆ ದೃಡೀಕರಣ ಪತ್ರವನ್ನು ಪಡೆಯಬಹುದಾಗಿರುತ್ತದೆ. 2015-16ನೇ ಸಾಲಿನಿಂದ ತೋಟಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಫಲಾನುಭವಿ ಆಧಾರಿತ ಯೋಜನೆಗಳಡಿ ಕಡ್ಡಾಯವಾಗಿ ಗಣಕೀಕೃತ ಬೆಳೆ ದೃಡೀಕರಣ ಪತ್ರವನ್ನು ಪಡೆಯಲು ತೋಟಗಾರಿಕಾ ಇಲಾಖಾ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಈ ಮೂಲಕ ರೈತ ಬಾಂದವರಲ್ಲಿ ವಿನಂತಿಸುವುದೇನೆಂದರೆ ತೋಟಗಾರಿಕೆ ಇಲಾಖಾ ವತಿಯಿಂದ ಯಾವುದೇ ಸೌಲಭ್ಯವನ್ನು ಪಡೆಯಲು ತಾವುಗಳು ನಾಡ ಕಛೇರಿಗಳ ಮೂಲಕ ಗಣಕೀಕೃತ ಬೆಳೆ ದೃಡೀಕರಣ ಪತ್ರವನ್ನು ಪಡೆಯಲು ಅರ್ಜಿಗಳನ್ನು ಸಲ್ಲಿಸಲು ತಮ್ಮಲ್ಲಿ ಕೋರಲಾಗಿದೆ. ಅಟಲ್ ಜನಸ್ನೇಹಿ ಕೇಂದ್ರಗಳಲ್ಲಿನ ಅಧಿಕಾರಿಗಳು  ಅರ್ಜಿಗಳನ್ನು ಸ್ವೀಕರಿಸದಿದ್ದಲ್ಲಿ ಅಥವಾ ಗಣಕೀಕೃತ ಬೆಳೆ ದೃಡೀಕರಣ ಪತ್ರವನ್ನು ನೀಡುವಲ್ಲಿ ವಿಳಂಬ ಮಾಡಿದ್ದಲ್ಲಿ, ಸಂಬಂಧಿಸಿದ ಜಿಲ್ಲಾ ತೋಟಗಾರಿಕಾ ಉಪ ನಿರ್ದೇಶಕರವರನ್ನು ದೂರವಾಣಿ ಸಂಖ್ಯೆ: 080 – 22860640 ಸಂಪರ್ಕಿಸಬಹುದಾಗಿದೆ.

ಪಲ್ಲವಿ/ಬಾಬು/ಕೆಎಂ

# ರಾಜ್ಯ ಮಟ್ಟದ ಪರಿಶೀಲನಾ ಸಮಿತಿ ಸಭೆ

**ಬೆಂಗಳೂರು, ಅಕ್ಟೋಬರ್ 14 (ಕರ್ನಾಟಕ ವಾರ್ತೆ)**

ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗ, ನವದೆಹಲಿ ಇವರು ಅಕ್ಟೋಬರ್ 13 ರಿಂದ ಅಕ್ಟೋಬರ್ 18 ರವರೆಗೆ ರಾಜ್ಯಕ್ಕೆ ಭೇಟಿ ನೀಡಲಿದ್ದು, ಭೇಟಿಯ ಸಂದರ್ಭದಲ್ಲಿ ರಾಜ್ಯ ಸರ್ಕಾರದ ಉನ್ನತ ಅಧಿಕಾರಿಗಳು, ಸಿಂಡಿಕೇಟ್ ಬ್ಯಾಂಕ್, ಕೆನರಾ ಬ್ಯಾಂಕ್ ಹಾಗೂ ವಿಜಯಾ ಬ್ಯಾಂಕ್‌ನ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪರಿಶೀಲನೆ ನಡೆಸಲಿದೆ.

ಈ ಭೇಟಿ ಸಂದರ್ಭದಲ್ಲಿ ಆಯೋಗವು ಅಕ್ಟೋಬರ್ 15 ರಂದು ಮಧ್ಯಾಹ್ನ 2-00 ಗಂಟೆಗೆ ಬೆಂಗಳೂರು ವಸಂತನಗರದಲ್ಲಿರುವ ಮಿಲ್ಲರ್ಸ್ ರಸ್ತೆಯ ಡಾ. ಬಿ. ಆರ್. ಅಂಬೇಡ್ಕರ್ ಭವನದಲ್ಲಿ ಪರಿಶಿಷ್ಟ ಜಾತಿ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳು, ಪರಿಶಿಷ್ಟ ಜಾತಿ ನೌಕರರ ಸಂಘದ ಪದಾಧಿಕಾರಿಗಳು, ಹಾಗೂ ಸಾರ್ವಜನಿಕರನ್ನೂ ಸಹ ಭೇಟಿಮಾಡಿ, ಚರ್ಚಿಸಲಿದೆ.

ಆಯೋಗದೊಂದಿಗೆ ಭೇಟಿಮಾಡಿ ಚರ್ಚಿಸಲು ಇಚ್ಛಿಸುವ ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳು, ಪರಿಶಿಷ್ಟ ಜಾತಿ ನೌಕರರ ಸಂಘದ ಪದಾಧಿಕಾರಿಗಳು, ಹಾಗೂ ಸಾರ್ವಜನಿಕರು ಸಮಾಜ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಿ, ಹೆಸರುಗಳನ್ನು ನೋಂದಾಯಿಸಬಹುದು. (ದೂರವಾಣಿ ಸಂಖ್ಯೆ 080-22204821)

ಪಲ್ಲವಿ:ಬಾಬು:ಜಿಪಿಆರ್.

# ರಾಜ್ಯ ಮಟ್ಟದ ಪರಿಶೀಲನಾ ಸಮಿತಿ ಸಭೆ

**ಬೆಂಗಳೂರು, ಅಕ್ಟೋಬರ್ 14 (ಕರ್ನಾಟಕ ವಾರ್ತೆ)**

ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗ, ನವದೆಹಲಿ ಇವರು ಅಕ್ಟೋಬರ್ 13 ರಿಂದ ಅಕ್ಟೋಬರ್ 18 ರವರೆಗೆ ರಾಜ್ಯಕ್ಕೆ ಭೇಟಿ ನೀಡಲಿದ್ದು, ಭೇಟಿಯ ಸಂದರ್ಭದಲ್ಲಿ ರಾಜ್ಯ ಸರ್ಕಾರದ ಉನ್ನತ ಅಧಿಕಾರಿಗಳು, ಸಿಂಡಿಕೇಟ್ ಬ್ಯಾಂಕ್, ಕೆನರಾ ಬ್ಯಾಂಕ್ ಹಾಗೂ ವಿಜಯಾ ಬ್ಯಾಂಕ್‌ನ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪರಿಶೀಲನೆ ನಡೆಸಲಿದೆ.

ಈ ಭೇಟಿ ಸಂದರ್ಭದಲ್ಲಿ ಆಯೋಗವು ಅಕ್ಟೋಬರ್ 15 ರಂದು ಪೂರ್ವಾಹ್ನ 11-00 ರಿಂದ 1-00 ಗಂಟೆವರೆಗೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಪರಿಶಿಷ್ಟ ಜಾತಿಗೆ ಸೇರಿರುವ ಹಾಲಿ ಹಾಗೂ ಮಾಜಿ ಸಂಸದರು ಹಾಗೂ ಶಾಸಕರನ್ನು ಭೇಟಿಮಾಡಿ, ಚರ್ಚಿಸಲಿದ್ದು, ಹಾಗೂ ಅದೇ ರೀತಿ ಆಯೋಗವು ಪರಿಶಿಷ್ಟ ಜಾತಿ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳು, ಪರಿಶಿಷ್ಟ ಜಾತಿ ನೌಕರರ ಸಂಘದ

ಪದಾಧಿಕಾರಿಗಳು, ಹಾಗೂ ಸಾರ್ವಜನಿಕರನ್ನು ಸಹ ಮಧ್ಯಾಹ್ನ 2–00 ಗಂಟೆಯಿಂದ 4–00 ಗಂಟೆವರೆಗೆ ಭೇಟಿಮಾಡಿ, ಚರ್ಚಿಸಲಿರುವರು.

ಆಯೋಗದೊಂದಿಗೆ ಭೇಟಿಮಾಡಿ ಚರ್ಚಿಸಲು ಇಚ್ಛಿಸುವ ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳು, ಪರಿಶಿಷ್ಟ ಜಾತಿ ನೌಕರರ ಸಂಘದ ಪದಾಧಿಕಾರಿಗಳು, ಹಾಗೂ ಸಾರ್ವಜನಿಕರು ಸಮಾಜ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಿ, ಹೆಸರುಗಳನ್ನು ನೋಂದಾಯಿಸಬಹುದು. (ದೂರವಾಣಿ ಸಂಖ್ಯೆ 080–22252623)

ಪಲ್ಲವಿ:ಬಾಬು:ಜಿಪಿಆರ್.